ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 19/06/2019

# ರೋಷನ್ ಬೇಗ್ ಅಮಾನತು

**ಬೆಂಗಳೂರು:** ಕಾಂಗ್ರೆಸ್ ಹಿರಿಯ ನಾಯಕರ ವಿರುದ್ಧ ಹೇಳಿಕೆ ನೀಡಿ ಮುಜುಗರಕ್ಕೆ ಕಾರಣವಾಗಿದ್ದ ಶಿವಾಜಿನಗರ ಶಾಸಕ ಮತ್ತು ಮಾಜಿ ಸಚಿವ ರೋಷನ್ ಬೇಗ್‌ರನ್ನು ಕಾಂಗ್ರೆಸ್ ಪಕ್ಷದ ಸದಸ್ಯತ್ವದಿಂದ ಅಮಾನತು ಮಾಡಲಾಗಿದೆ. ಎಐಸಿಸಿ ಸೂಚನೆಯ ಮೇರೆಗೆ ರಾಜ್ಯ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವೆಂಕಟರಾವ್ ಘೋರ್ಪಡೆ ಅಮಾನತು ಆದೇಶ ಹೊರಡಿಸಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಹೀನಾಯ ಸೋಲಿಗೆ ರಾಜ್ಯ ಉಸ್ತುವಾರಿ ಕೆ.ಸಿ.ವೇಣುಗೋಪಾಲ್, ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಕಾರಣ ಎಂದು ಬೇಗ್ ಬಹಿರಂಗವಾಗಿ ಆರೋಪಿಸಿದ್ದರು. ಜತೆಗೆ ವೇಣುಗೋಪಾಲ್‌ರನ್ನು 'ಬಫೂನ್' ಎಂದೂ ಕರೆದಿದ್ದರು. ಜತೆಗೆ ಐಎಂಎ ಹಗರಣದಲ್ಲಿ ಬೇಗ್ ಹೆಸರು ಕೇಳಿ ಬಂದ ಹಿನ್ನೆಲೆಯಲ್ಲಿ ಕೆಪಿಸಿಸಿಯೂ ಎಐಸಿಸಿಗೆ ದೂರು ನೀಡಿತ್ತು.

